ಮೀಸೆಯನ್ನು ಕತ್ತರಿಸುವುದು, ಉಗುರುಗಳನ್ನು ಕತ್ತರಿಸುವುದು, ಕಂಕುಳಿನ ಕೂದಲನ್ನು ಕೀಳುವುದು, ಮತ್ತು ಗುಪ್ತಾಂಗದ (ಸುತ್ತಲಿನ) ಕೂದಲನ್ನು ಬೋಳಿಸುವುದು – ಇವುಗಳಲ್ಲಿ ನಾವು ನಲವತ್ತು ರಾತ್ರಿಗಳಿಗಿಂತ ಹೆಚ್ಚು ಕಾಲ (ಅವುಗಳನ್ನು ಹಾಗೆಯೇ) ಬಿಡಬಾರದೆಂದು ನಮಗೆ ಸಮಯವನ್ನು ನಿಗದಿಪಡಿಸಲಾಗಿದೆ

ಅನಸ್ ಬಿನ್ ಮಾಲಿಕ್ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಅವರು ಹೇಳಿದರು: "ಮೀಸೆಯನ್ನು ಕತ್ತರಿಸುವುದು, ಉಗುರುಗಳನ್ನು ಕತ್ತರಿಸುವುದು, ಕಂಕುಳಿನ ಕೂದಲನ್ನು ಕೀಳುವುದು, ಮತ್ತು ಗುಪ್ತಾಂಗದ (ಸುತ್ತಲಿನ) ಕೂದಲನ್ನು ಬೋಳಿಸುವುದು – ಇವುಗಳಲ್ಲಿ ನಾವು ನಲವತ್ತು ರಾತ್ರಿಗಳಿಗಿಂತ ಹೆಚ್ಚು ಕಾಲ (ಅವುಗಳನ್ನು ಹಾಗೆಯೇ) ಬಿಡಬಾರದೆಂದು ನಮಗೆ ಸಮಯವನ್ನು ನಿಗದಿಪಡಿಸಲಾಗಿದೆ."
[صحيح] [رواه مسلم]

ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಪುರುಷನ ಮೀಸೆಯನ್ನು ಕತ್ತರಿಸುವುದು, ಕೈ ಮತ್ತು ಕಾಲುಗಳ ಉಗುರುಗಳನ್ನು ಕತ್ತರಿಸುವುದು, ಕಂಕುಳಿನ ಕೂದಲನ್ನು ಕೀಳುವುದು, ಮತ್ತು ಗುಪ್ತಾಂಗದ ಕೂದಲನ್ನು ಬೋಳಿಸುವುದು – ಇವುಗಳನ್ನು ನಲವತ್ತು ದಿನಗಳಿಗಿಂತ ಹೆಚ್ಚು ಕಾಲ ಬಿಡಬಾರದೆಂದು ಸಮಯವನ್ನು ನಿಗದಿಪಡಿಸಿದರು.

http://www.sunnah.global/hadeeth/kn/show/66049